**All India Radio: Bangalore**
**Regional Bulletin In Kannada**
**03.12.2025 / 2.30 p.m.**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ರಾಜ್ಯದಲ್ಲಿ ೨೧ ಸಾವಿರದ ೬೭೫ ಮೆಗಾವ್ಯಾಟ್ ಸಾಮರ್ಥ್ಯದ ನವೀಕರಿಸಬಹುದಾದ ಇಂಧನ ಉತ್ಪಾದನೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
2. ಶಿಕ್ಷಣದಿಂದ ಮಾತ್ರ ಸಮಾಜದಲ್ಲಿ ಮಹತ್ತರ ಬದಲಾವಣೆ ಸಾಧ್ಯ : ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದನೆ
3. ಜಾಗತಿಕ ಮಟ್ಟದಲ್ಲಿ ಕೌಶಲ್ಯ ತರಬೇತಿ ಪಡೆದ ಯುವಕರಿಗೆ ಹೆಚ್ಚಿದ ಬೇಡಿಕೆ - ಸಚಿವ ಡಾ. ಶರಣಪ್ರಕಾಶ್ ಪಾಟೀಲ್
4. ಬೆಂಗಳೂರಿನ ನಾಗಾವರ ಜಂಕ್ಷನ್ ಬಳಿ ಮೆಟ್ರೋ ಕಾಮಗಾರಿ ಪರಿಶೀಲನೆ ನಡೆಸಿದ ಕಂದಾಯ ಸಚಿವ ಕೃಷ್ಣ ಬೈರೇಗೌಡ
5. ಚಿಕ್ಕಮಗಳೂರಿನಲ್ಲಿ ದತ್ತಜಯಂತಿ ಶೋಭಾಯಾತ್ರೆಗೆ ಕ್ಷಣಗಣನೆ : ಜಿಲ್ಲಾಡಳಿತದಿಂದ ಬಿಗಿಭದ್ರತೆ

<><><><>

ರಾಜ್ಯದಲ್ಲಿ ಇದುವರೆಗೆ ಒಟ್ಟು ೨೧ ಸಾವಿರದ ೬೭೫ ಮೆಗಾವ್ಯಾಟ್ ಸಾಮರ್ಥ್ಯದ ನವೀಕರಿಸಬಹುದಾದ ಇಂಧನ ಉತ್ಪಾದಿಸಲಾಗಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಷಿ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ದೇಶಾದ್ಯಂತ ಸ್ಥಾಪಿಸಲಾದ ನವೀಕರಿಸಬಹುದಾದ ಇಂಧನ ವಲಯದಿಂದ ೨ ಲಕ್ಷ ೫೦ ಸಾವಿರದ ೬೪೩ ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಲಾಗಿದೆ ಎಂದು ತಿಳಿಸಿದ್ದಾರೆ. ದೇಶದ ಇಂಧನ ಪಯಣದಲ್ಲಿ ಪ್ರಮುಖ ಮೈಲಿಗಲ್ಲು ಇದಾಗಿದೆ. ಒಟ್ಟು ಅನುಷ್ಠಾನ ಮಾಡಲಾದ ವಿದ್ಯುತ್ ಸಾಮರ್ಥ್ಯದ ಶೇಕಡ ೫೦ರಷ್ಟು ನವೀಕರಿಸಬಹುದಾದ ವಿದ್ಯುತ್ ಉತ್ಪಾದನೆ ಮಾಡಲಾಗಿದ್ದು, ಸ್ವಚ್ಛ, ಹಸಿರು ಮತ್ತು ಸುಸ್ಥಿರ ವಿದ್ಯುತ್ ಕ್ಷೇತ್ರದಲ್ಲಿ ತ್ವರಿತ ಬದಲಾವಣೆಗೆ ಸಾಕ್ಷಿಯಾಗಿದೆ ಎಂದು ಹೇಳಿದ್ದಾರೆ.

<><><><>

ಬ್ರಹ್ಮಶ್ರೀ ನಾರಾಯಣ ಗುರುಗಳು ದೇಶಕ್ಕೆ ಸಮಾನತೆಯ ಸಂದೇಶ ಸಾರಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ ನಡೆದ "ಶತಮಾನದ ಪ್ರಸ್ತಾನ ನಾರಾಯಣಗುರು ಮಹಾತ್ಮಗಾಂಧಿ ಐತಿಹಾಸಿಕ ಸಂವಾದ ಶತಮಾನೋತ್ಸವ ಮತ್ತು ಶ್ರೀ ಗುರುವಿನ ಮಹಾಸಮಾಧಿ ಶತಾಬ್ದಿ, ಸರ್ವಮತ ಸಮ್ಮೇಳನ ಶತಮಾನೋತ್ಸವ, ಯತಿ ಪೂಜೆಯನ್ನು ಅವರು ಉದ್ಘಾಟಿಸಿದರು. ಒಂದೇ ಜಾತಿ ಒಂದೇ ಧರ್ಮ ಒಂದೇ ದೇವರು ಎಂದು ನಾರಾಯಣ ಗುರುಗಳು ಪ್ರತಿಪಾದಿಸಿದ್ದರು ಎಂದು ಹೇಳಿದ್ದಾರೆ. ದೇಶದಲ್ಲಿ ಇಂದು ಜಾತಿ ವ್ಯವಸ್ಥೆ ಮತ್ತೆ ಬೇರೂರಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ. ಶಿಕ್ಷಣದ ಮೂಲಕ ಮಾತ್ರ ಮಹತ್ತರ ಬದಲಾವಣೆ ಸಾಧ್ಯ ಎಂದ ಅವರು, ಇದಕ್ಕೆ ಪೂರಕವಾಗಿ ಸರ್ಕಾರ ಶಿಕ್ಷಣಕ್ಕೆ ಆದ್ಯತೆ ನೀಡಿದೆ ಎಂದು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಸಭಾಧ್ಯಕ್ಷ ಯು.ಟಿ. ಖಾದರ್, ಸಚಿವರಾದ ಡಾ. ಜಿ. ಪರಮೇಶ್ವರ್, ದಿನೇಶ್ ಗುಂಡೂರಾವ್, ವಿಧಾನಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್, ಕೇಂದ್ರದ ಮಾಜಿ ಸಚಿವ ಬಿ. ಜನಾರ್ಧನ ಪೂಜಾರಿ ಪಾಲ್ಗೊಂಡಿದ್ದರು.

<><><><>

ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ತರಬೇತಿ ಪಡೆಯುತ್ತಿರುವ ಉದ್ಯೋಗಿಗಳಿಗೆ ಜಾಗತಿಕ ಮಟ್ಟದಲ್ಲಿ ಹೆಚ್ಚಿನ ಬೇಡಿಕೆ ಬರುತ್ತಿರುವುದು ಸಂತಸದ ವಿಚಾರ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಆರ್. ಪಾಟೀಲ್ ತಿಳಿಸಿದ್ದಾರೆ. ಸ್ಲೋವಾಕಿಯಾದಲ್ಲಿ ಮಾತನಾಡಿದ ಅವರು, ರಾಜ್ಯದ ಯುವಕರು ಜಾಗತಿಕ ಮಟ್ಟದಲ್ಲಿ ಅವಕಾಶ ಪಡೆದುಕೊಳ್ಳುತ್ತಿದ್ದಾರೆ ಎಂದು ಹೆಮ್ಮೆ ವ್ಯಕ್ತಪಡಿಸಿದರು. ಬ್ರಾಸಿಸ್ಲಾವಾದಲ್ಲಿರುವ ಸಿಟ್ರೊಯೆನ್ ಸಿ೩, ಸಿ೩ ಏರ್‌ಕ್ರಾಸ್ ಮತ್ತು ಒಪೆಲ್ ಫ್ರಾಂಟೆರಾ ಮಾದರಿಗಳ ವಾಹನ ತಯಾರಕ ಸಂಸ್ಥೆಯಾದ ಸ್ಟೆಲ್ಲಾಂಟಿಸ್ ಈಗಾಗಲೇ ಆಟೊಮೊಬೈಲ್ ವಿದ್ಯುತ್ ಕೌಶಲ್ಯ ತರಬೇತಿ ಹೊಂದಿದವರನ್ನು ಕಳುಹಿಸಿಕೊಡಬೇಕೆಂದು ಮನವಿ ಮಾಡಿದೆ ಎಂದು ಹೇಳಿದ್ದಾರೆ. ಬ್ರಾಟಿಸ್ಲಾವಾ ಬಳಿಯ ತ್ರ್ನಾವಾ ಘಟಕದಲ್ಲಿ ಈಗಾಗಲೇ ರಾಜ್ಯದ ಸುಮಾರು ೧೦೦ ಅಸೆಂಬ್ಲಿ-ಲೈನ್ ಆಪರೇಟರ್‌ಗಳು ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ. ಫೆಬ್ರವರಿ ೨೦೨೬ ರಲ್ಲಿ ಬೆಂಗಳೂರಿನಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ಉದ್ಯೋಗ ಮೇಳಕ್ಕೆ ಪೂರ್ವಭಾವಿಯಾಗಿ ಸಚಿವರಾದ ಡಾ. ಶರಣಪ್ರಕಾಶ್ ಆರ್. ಪಾಟೀಲ್, ಡಾ. ಎಂ.ಸಿ. ಸುಧಾಕರ್ ಯುರೋಪ್ ಖಂಡದ ಪ್ರವಾಸ ಕೈಗೊಂಡಿದ್ದು, ರೋಡ್ ಶೋ ನಡೆಸುತ್ತಿದ್ದಾರೆ. ರಾಜ್ಯದ ಉದ್ಯೋಗಿಗಗಳಿಗೆ ಸ್ಥಾವರದಲ್ಲಿ ನೀಡುತ್ತಿರುವ ಸೌಲಭ್ಯಗಳು ಮತ್ತು ಇತರೆ ವ್ಯವಸ್ಥೆಯ ಕುರಿತು ಉಭಯ ಸಚಿವರು ಪರಿಶೀಲನೆ ನಡೆಸಿದರು.

<><><><>

ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು, ಇಂದು ತಮ್ಮ ಕ್ಷೇತ್ರ ವ್ಯಾಪ್ತಿಯ ನಾಗವಾರ ಜಂಕ್ಷನ್ ನಿಂದ ಯಲಹಂಕವರೆಗಿನ ಹೊರವರ್ತುಲ ರಸ್ತೆ ಮತ್ತು ಬಳ್ಳಾರಿ ರಸ್ತೆಯಲ್ಲಿ ನಡೆಯುತ್ತಿರುವ ಮೆಟ್ರೋ ಕಾಮಗಾರಿಗಳನ್ನು ಪರಿಶೀಲಿಸಿ, ಸಂಬಂಧಿಸಿದ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು. ಈ ಸಂದರ್ಭದಲ್ಲಿ ನಾಗವಾರ ಜಂಕ್ಷನ್ ಮೆಟ್ರೋ ಕಾಮಗಾರಿ ಶೀಘ್ರ ಪೂರ್ಣಗೊಳಿಸಿ, ಕಾಮಗಾರಿಯ ಪ್ರದೇಶದಲ್ಲಿ ಹೆಚ್ಚುವರಿ ಸಾಮಗ್ರಿ ಹಾಗೂ ಭಗ್ನಾವಶೇಷಗಳನ್ನು ತೆರವುಗೊಳಿಸುವಂತೆ ತಿಳಿಸಿದ್ದಾರೆ. ಸರ್ವಿಸ್ ರಸ್ತೆಯನ್ನು ಸಂಚಾರಕ್ಕೆ ಯೋಗ್ಯವಾಗಿಡುವಂತೆ ಮತ್ತು ಬಳ್ಳಾರಿ ರಸ್ತೆ, ಎಸ್ಟೀಮ್ ಮಾಲ್ ಬಳಿಯ ಸರ್ವಿಸ್ ರಸ್ತೆಗೆ ಸೂಕ್ತ ಪ್ರವೇಶ ಹಾಗೂ ನಿರ್ಗಮನ ವ್ಯವಸ್ಥೆ ಕಲ್ಪಿಸಲು, ನಿರ್ದೇಶನ ನೀಡಿದ್ದಾರೆ. ಹೆಬ್ಬಾಳದಿಂದ ಬಾಗಲೂರು ಕ್ರಾಸ್‌ವರೆಗೆ ಉತ್ತರ ನಗರ ಪಾಲಿಕೆ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮತ್ತು ಮೆಟ್ರೋ ಸಂಸ್ಥೆಗಳು ಸಂಯುಕ್ತವಾಗಿ ಸ್ವಚ್ಛತಾ ಅಭಿಯಾನವನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಆದೇಶ ನೀಡಿದ್ದಾರೆ.

<><><><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ದತ್ತ ಜಯಂತಿ ಅಂಗವಾಗಿ ಶೋಭಾಯಾತ್ರೆ ನಡೆಯಲಿದೆ. ಮಧ್ಯಾಹ್ನ ೩ ಗಂಟೆಗೆ ನಗರದ ಕಾಮಧೇನು ಗಣಪತಿ ದೇವಾಲಯದಿಂದ ಆರಂಭಗೊಳ್ಳಲಿರುವ ಶೋಭಾ ಯಾತ್ರೆಯು ಬಸವನಹಳ್ಳಿ ರಸ್ತೆ, ಹನುಮಂತಪ್ಪ ವೃತ್ತ, ಎಂ.ಜಿ ರಸ್ತೆ ಮೂಲಕ ಅಜಾದ್ ಪಾರ್ಕ್ ತಲುಪಲಿದ್ದು ಅಲ್ಲಿ ಸಭಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಅಂಗವಾಗಿ ಇಂದು ಮುಂಜಾನೆ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ನೇತೃತ್ವದಲ್ಲಿ ನಗರದಲ್ಲಿ ಮನೆ ಮನೆಗೆ ತೆರಳಿ ಪಡಿ ಸಂಗ್ರಹಿಸುವ ಕಾರ್ಯಕ್ರಮ ನಡೆಯಿತು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂದು ಶೋಭಾ ಯಾತ್ರೆ ನಡೆಯಲಿದ್ದು ನಾಳೆ ದತ್ತಪೀಠದಲ್ಲಿ ದತ್ತ ಜಯಂತಿ ನಡೆಯಲಿದೆ. ಜಿಲ್ಲಾಡಳಿತ ಅಗತ್ಯ ಮೂಲ ಸೌಕರ್ಯಗಳನ್ನು ಕಲ್ಪಿಸಿದ್ದು ಕಾರ್ಯಕ್ರಮ ಯಾವುದೆ ಗೊಂದಲಗಳಿಲ್ಲದೆ ಯಶಸ್ವಿಯಾಗಲಿದೆ ಎಂದು ಭರವಸೆ ವ್ಯಕ್ತಪಡಿಸಿದ್ದಾರೆ.

<><><><>

ತುಂಗಭದ್ರಾ ಜಲಾಯಶಯದ ಗೇಟ್‌ಗಳ ದುರಸ್ತಿ ಕಾರ್ಯ ಪ್ರಾರಂಭಿಸುವ ಕುರಿತು ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ಕೊಪ್ಪಳದಲ್ಲಿ ನಿನ್ನೆ ಅಧಿಕಾರಿಗಳ ಸಭೆ ನಡೆಸಿದ್ದಾರೆ.

ಸಭೆಯಲ್ಲಿ ಇಲಾಖೆಗೆ ಸಂಬಂಧಪಟ್ಟ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು ಉಪಸ್ಥಿತರಿದ್ದರು. ಗೇಟ್‌ಗಳ ದುರಸ್ತಿ ಕಾರ್ಯದ ಸಾಧಕ ಬಾಧಕ ಕುರಿತು ಅಧಿಕಾರಿಗಳಿಂದ ಸಚಿವರು ಮಾಹಿತಿ ಪಡೆದುಕೊಂಡು, ಶೀಘ್ರ ಸಮಸ್ಯೆಗಳನ್ನು ಬಗೆಹರಿಸಿ ಕಾಮಗಾರಿ ಆರಂಭಿಸುವಂತೆ ಸೂಚನೆ ನೀಡಿದ್ದಾರೆ. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಲಾಶಯದಲ್ಲಿ ಹೆಚ್ಚುವರಿ ನೀರು ಇರುವುದರಿಂದ ದುರಸ್ತಿ ಕಾರ್ಯ ಕಷ್ಟಸಾಧ್ಯ. ಸುಮಾರು ೧೭ ಟಿಎಂಸಿ ಯಷ್ಟು ನೀರು ಖಾಲಿಯಾದ ನಂತರ ತುಂಗಭದ್ರಾ ಜಲಾಶಯದ ಗೇಟ್ ನ ದುರಸ್ತಿ ಸಾಧ್ಯವಾಗಲಿದೆ ಎಂದು ಹೇಳಿದ್ದಾರೆ. ಡಿಸೆಂಬರ್ ೫ ರಿಂದ ಕಾಮಗಾರಿ ಆರಂಭಿಸಿ, ಜನವರಿ ೧೦ ರಿಂದ ರೈತರ ಬೆಳೆಗಳಿಗೆ ನೀರು ಸರಬರಾಜು ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ರಾಜ್ಯದ ಹಲವೆಡೆ ಇಂದು ದಿವ್ಯಾಂಗರ ದಿನವನ್ನು ಆಚರಿಸಲಾಗುತ್ತಿದೆ. ವಿಕಲಚೇತನರಲ್ಲಿ ವಿಶೇಷವಾದ ಚೈತನ್ಯ ಮತ್ತು ಚೇತನ ಇರುವುದರಿಂದ ಅವರನ್ನು ದಿವ್ಯಾಂಗರು ಎಂದು ಕರೆಯಲಾಗುತ್ತದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಪ್ರತಿಭೆಗೆ ಅನುಗುಣವಾಗಿ ಅವಕಾಶಗಳು ದೊರೆಯಬೇಕು. ಅವರೆಲ್ಲರೂ ಸ್ವಾವಲಂಬಿಗಳಾಗಿ ಬದುಕು ಸಾಗಿಸಬೇಕು ಎಂಬುದೇ ನಮ್ಮ ಆಶಯ ಎಂದು ಹೇಳಿದರು. ಸಮಗ್ರ ಮತ್ತು ಸುಸ್ಥಿರ ಭವಿಷ್ಯಕ್ಕಾಗಿ ದಿವ್ಯಾಂಗ ವ್ಯಕ್ತಿಗಳಲ್ಲಿ ನಾಯಕತ್ವ ಉತ್ತೇಜನ ಎಂಬ ಘೋಷವಾಕ್ಯದಡಿ ಬಳ್ಳಾರಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗ ಮಂದಿರದಲ್ಲಿ ಇಂದು ವಿಶ್ವ ದಿವ್ಯಾಂಗರ ದಿನಾಚರಣೆಯನ್ನು ಜಿಲ್ಲಾಡಳಿತ ಹಮ್ಮಿಕೊಂಡಿತ್ತು. ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶ ರಾಜೇಶ್.ಎಸ್ ಹೊಸಮನೆ ಉದ್ಘಾಟಿಸಿದರು. ವಿಕಲಚೇತನರಿಗೆ ಒಂದು ವಿಶೇಷ ಶಕ್ತಿ ಇರುತ್ತದೆ. ಅದನ್ನು ಬೆಳೆಸಲು ಪಾಲಕ ಪೋಷಕರು ಸಹಕಾರಿಯಾಗಬೇಕು ಎಂದು ಕರೆ ನೀಡಿದ್ದಾರೆ.

<><><><>

ಕರ್ನಾಟಕ ರಾಜ್ಯ ಶಿಕ್ಷಕರ ಅರ್ಹತೆ ಪರೀಕ್ಷೆ ಇದೇ ೭ ರಂದು ನಡೆಯಲಿದೆ. ಪರೀಕ್ಷಾ ಕೇಂದ್ರದಲ್ಲಿ ಯಾವುದೇ ಗೊಂದಲಗಳಿಗೆ ಅವಕಾಶ ಇರಬಾರದು. ಹಾಗೂ ಅಧಿಕಾರಿಗಳು ಯಾವುದೇ ಅಡಚಣೆ ಇಲ್ಲದೆ ಪಾರದರ್ಶಕತೆಯಿಂದ ಯಶಸ್ವಿಯಾಗಿ ಕಾರ್ಯ ನಿರ್ವಹಿಸಬೇಕು ಎಂದು ಕೋಲಾರ ಜಿಲ್ಲಾಧಿಕಾರಿ ಎಂ.ಆರ್ ರವಿ ಸೂಚಿಸಿದ್ದಾರೆ. ದಾವಣಗೆರೆ ಜಿಲ್ಲೆಯ ೧೯ ಕೇಂದ್ರಗಳಲ್ಲಿ ಶಿಕ್ಷಕರ ಅರ್ಹತಾ ಪರೀಕ್ಷೆ ಟಿಇಟಿ ನಡೆಸಲು ಎಲ್ಲ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ.ಕೊಟ್ರೇಶಪ್ಪ ತಿಳಿಸಿದ್ದಾರೆ. ಪರೀಕ್ಷೆಗೆ ೯ ಸಾವಿರದ ೭೫೪ ಅಭ್ಯರ್ಥಿಗಳು ಹೆಸರು ನೊಂದಾಯಿಸಿದ್ದಾರೆ. ಹಾವೇರಿ ಜಿಲ್ಲೆಯ ೧೪ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ಪ್ರತಿಯೊಂದು ಪರೀಕ್ಷೆ ಕೇಂದ್ರದಲ್ಲೂ ಕಡ್ಡಾಯವಾಗಿ ಸಿ.ಸಿ.ಟಿ.ವಿ. ಕ್ಯಾಮೆರಾ ಇರುವಂತೆ ನೋಡಿಕೊಳ್ಳುವುದರ ಜೊತೆಗೆ ಪರೀಕ್ಷೆ ಆರಂಭದಿಂದ ಕೊನೆಯವರೆಗೂ ಯಾವುದೇ ಲೋಪವಾಗದಂತೆ ವ್ಯವಸ್ಥೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಸೂಚಿಸಿದ್ದಾರೆ.

<><><><>

ಬೆಂಗಳೂರಿನ ಚಿಕ್ಕಪೇಟೆ ವಿಭಾಗದ ಗಾಂಧಿಬಜಾರ್ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಗಿದೆ ಎಂದು ಕೇಂದ್ರ ನಗರ ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>